**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ**
**ಶ್ರೀ ಕೆ.ಟಿ. ಶ್ರೀಕಂಠೇಗೌಡ, ಶ್ರೀ ಕೆ.ಎ. ತಿಪ್ಪೇಸ್ವಾಮಿ ಹಾಗೂ ಶ್ರೀ ನಿರಾಣಿ ಹಣಮಂತ ರುದ್ರಪ್ಪ ಇವರುಗಳು**
**ನಿಯಮ 330 ರಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ**

**ವಿಷಯ:**

"2004 ರಿಂದ ರಾಜ್ಯದಲ್ಲಿ ಜಾರಿಯಲ್ಲಿರುವ ಹೊಸ ಪಿಂಚಣಿ ಪದ್ಧತಿಯಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಹಾಗೂ (ಸರ್ಕಾರದ ಗಮನ ಸೆಳೆಯುವುದರ ಜೊತೆ) ಹಳೆ ಪಿಂಚಣಿ ಪದ್ಧತಿ ಜಾರಿಗೆ ತರುವ (ಒತ್ತಾಯಿಸುವುದರ) ಬಗ್ಗೆ ಸದನದಲ್ಲಿ ಪ್ರಸ್ತಾಪಿಸಿರುತ್ತಾರೆ."

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಮುಂದುವರೆದು, ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರಂದು ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

**ಸಂಖ್ಯೆ: ಆಇ 263 ಪಿಇಎನ್ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ